# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 46(34)
ಮಾನ್ಯ ಸದಸ್ಯರ ಹೆಸರ : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 07.12.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರೌಢಶಿಕ್ಷಣ ಮತ್ತು ಪದವಿ ಪೂರ್ವ ಶಿಕ್ಷಣಗಳಿಗೆ ಸರ್ಕಾರ ಮಂಜೂರಾತಿ ನೀಡಿದ್ದು, ಇಲ್ಲಿಯವರೆಗೂ ಅನುದಾನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; ಯಾವ ಕಾಲಮಿತಿಯೊಳಗೆ ಅನುದಾನ ನೀಡಲಾಗುವುದು? (ವಿವರ ನೀಡುವುದು) | ದಿ: 01/06/1987 ರಿಂದ 1994-95ನೇ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಪ್ರಾರಂಭವಾದ ಅನುದಾನರಹಿತ ಶಾಲೆಗಳನ್ನು ಸಹಾನುದಾನಕ್ಕೆ ಒಳಪಡಿಸಲು ಅವಕಾಶಕಲ್ಪಿಸಲಾಗಿದೆ. 1995ರ ನಂತರದಲ್ಲಿ ಪ್ರಾರಂಭವಾಗಿ ಅವಿಚ್ಛಿನ್ನವಾಗಿ ನಡೆಯುತ್ತಿರುವ ಅನುದಾನರಹಿತ ಕನ್ನಡ ಶಾಲಾ ಕಾಲೇಜುಗಳಿಗೆ ಸಹಾಯಾನುದಾನವನ್ನು ಒದಗಿಸಿಕೊಡುವಂತೆ ಬೇಡಿಕೆ ಇದ್ದು, ಈ ಬಗ್ಗೆ ಹಲವು ಸುತ್ತುಗಳಲ್ಲಿ ಸಭೆ ನಡೆಸಿ ಚರ್ಚಿಸಲಾಗಿದ್ದು, 1995 ರಿಂದ 2018ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಗೆ ಶಾಲಾ ಕಾಲೇಜುಗಳ ಸಂಖ್ಯೆ, ಅವುಗಳ ಹೆಸರು, ಒಟ್ಟು ಶಿಕ್ಷಕರುಗಳ ಸಂಖ್ಯೆ ಹಾಗೂ ಅಂದಾಜು ವೆಚ್ಚದ ಮಾಹಿತಿ ಅವಶ್ಯಕತೆಯನ್ನು ಮನಗಂಡು, ಸದರಿ ಕ್ರೋಢೀಕೃತ ಮಾಹಿತಿಯನ್ನು ಪಡೆಯಲು ಕ್ರಮಕೈಗೊಳ್ಳಲಾಗುತ್ತಿದೆ.<br>ಮಾಹಿತಿಯನ್ನು ಸಂಗ್ರಹಿಸಿ ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಲಾಗುವುದು. ಆರ್ಥಿಕ ಇಲಾಖೆಯ ಸಹಮತಿ ಬಂದ ನಂತರ ಜಾರಿಗೊಳಿಸಲಾಗುವುದು. |

ಸಂ:ಇಪಿ 366 ಎಸ್‌ಇಎಸ್ 2020

S. Su

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಹಾಗೂ ಸಕಾಲ ಸಚಿವರು.